ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಗೊಟ್ಟಿಗೆರೆ ವಾರ್ಡ್ ಸಂಖ್ಯೆ–194.**

**ವಾರ್ಡ್ ಕಛೇರಿಯಲ್ಲಿ ದಿನಾಂಕ: 17–07–2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

| ಹಾಜರಿದ್ದವರು | ಗೈರುಹಾಜರು |
|---|---|
| 1. ಅಧ್ಯಕ್ಷರು. ಗೊಟ್ಟಿಗೆರೆ. ವಾರ್ಡ್ ಸಮಿತಿ. ಬೊಮ್ಮನಹಳ್ಳಿ. ಬೆಂಗಳೂರು.<br>2. ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಾರ್ಯದರ್ಶಿ. ವಾರ್ಡ್ ನಂ.194. ಗೊಟ್ಟಿಗೆರೆ.<br>3. ವೈದ್ಯಾಧಿಕಾರಿಗಳು. ಗೊಟ್ಟಿಗೆರೆ.<br>4. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ). ಗೊಟ್ಟಿಗೆರೆ.<br>5. ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ)<br>6. ವಾರ್ಡ್ ಸಹಾಯಕ ಅಭಿಯಂತರರು ವಾರ್ಡ್ ನಂ.194. ಗೊಟ್ಟಿಗೆರೆ<br><br>ಸ್ಥಳೀಯ ಸಂಘ ಸದಸ್ಯರು:–<br>1. ಶ್ರೀ. ರಂಗೇಗೌಡರು ಅಧ್ಯಕ್ಷರು. ಸೌತ್ ಅವೆನ್ಯೂ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್. ಗೊಟ್ಟಿಗೆರೆ.<br>2. ಶ್ರೀಮತಿ. ಕೀರ್ತಿ ಅಧ್ಯಕ್ಷರು. ಹಿಮಗಿರಿ ಮೆಡೋಸ್. ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್. ಗೊಟ್ಟಿಗೆರೆ.<br>3. ಶ್ರೀ. ನಾಗರಾಜ್ ರಾವ್ ಅಧ್ಯಕ್ಷರು. ಪರಿವರ್ತನ ಸಂಘ. ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್. ಗೊಟ್ಟಿಗೆರೆ.<br>4. ಶ್ರೀಮತಿ ಸ್ವರೂಪ ಕೆ ಅಧ್ಯಕ್ಷರು. ಕ್ಲಾಸಿಕ್ ಆರ್ಚರ್ಡ್ಸ್. ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್. ಗೊಟ್ಟಿಗೆರೆ.<br>5. ಶ್ರೀ. ಜಿ.ಎಸ್ ರಾವ್ ಅಧ್ಯಕ್ಷರು. ಹೆಚ್.ಎಮ್ ವರ್ಲ್ಡ್‌ಸಿಟಿ. ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್. ಗೊಟ್ಟಿಗೆರೆ.<br>6. ಶ್ರೀ. ಶಿವಕುಮಾರ ಗೌಡ ಅಧ್ಯಕ್ಷರು. 7ನೇ ಬ್ಲಾಕ್ 9ನೇ ಹಂತ. ಜೆ.ಪಿ ನಗರ. ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್. ಗೊಟ್ಟಿಗೆರೆ. | **1. ಪೋಲಿಸ್ ಇಲಾಖೆ ಕ್ರೈಂ**<br>**2. ಪೋಲಿಸ್ ಇಲಾಖೆ ಟ್ರಾಫಿಕ್**<br>**3. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ)**<br>**4. ತೋಟಗಾರಿಕೆ ಇಲಾಖೆ**<br>**5. ಸಹಾಯಕ ಕಾರ್ಯಪಾಲಕ ಅಭಿಯಂತರರು (ಸ್ಟ್ರೀಟ್ ಲೈಟ್)** |

ದಿನಾಂಕ:**17–07–2021** ರಂದು ಮಧ್ಯಾಹ್ನ **03:00** ಘಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ರವರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ. ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ಕೋವಿಡ್–**19** ಸಂಬಂಧ ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಬಗ್ಗೆ.

(i) **ಅಧ್ಯಕ್ಷರು, ಮಾತನಾಡುತ್ತಾ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣಗಳಲ್ಲಿ ಇಳಿಮುಖ ಕಂಡುಬಂದಿದ್ದು, ಪ್ರಸ್ತುತ ವಾರದಲ್ಲಿ Positive ಪ್ರಕರಣಗಳು ಶುನ್ಯವಾಗಿರುತ್ತದೆ ಎಂದು ತಿಳಿಸುತ್ತಾ Covid ಸೂಕ್ತ ನಡವಳಿಯನ್ನು ಪಾಲಿಸಲು ಹಾಗೂ ಜಾಗೃತರಾಗಿ ಸಂಬಂಧಪಟ್ಟ ಲಕ್ಷಣಗಳು ಕಂಡುಬಂದ ಕೂಡಲೆ ಪರಿಕ್ಷಿಸಿಕೊಳ್ಳಲು ಹಾಗೂ Isolation ಮಾಡಿಕೊಳ್ಳಲು ಕೊರಲಾಯಿತು.**

(ii) **ವಾರ್ಡ್ ವ್ಯಾಪ್ತಿಯಲ್ಲಿ 45 ವರ್ಷ ಮೇಲ್ಪಟ್ಟ ಸಾರ್ವಜನಿಕರಿಗೆ Covishield 1ನೇ ಮತ್ತು 2ನೇ ಡೋಸ್ ನೀಡಲಾಗುತ್ತಿದ್ದು, 18 ವರ್ಷ ಮೇಲ್ಪಟ್ಟ ವಯಸ್ಸಿನವರಿಗೆ ಗುರುತಿಸಿರುವ ಪಟ್ಟಿಯನ್ವಯ ವಿಶೇಷ ಶಿಬಿರಗಳಲ್ಲಿ ಲಸಿಕೆ ನೀಡುತ್ತಿರುವುದಾಗಿ ತಿಳಿಸಿದರು.**

2. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.



Scanned by CamScanner

(I) ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರು ಸದರಿ ಸಭೆಯ ವೇಳೆಯಲ್ಲಿಯೇ ಸಾರ್ವಜನಿಕರ ಕುಂದು ಕೊರತೆಗಳ Online ಸಭೆಯನ್ನು ನಡೆಸುತ್ತಿದ್ದು, ಕುಂದು ಕೊರತೆಗಳಿರುವ RWA ಅಧ್ಯಕ್ಷರು ಸದರಿ ಸಭೆಯಲ್ಲಿ ಬಗೆಹರಿಸಿಕೊಳ್ಳಲು ಕೋರಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಂದ ಅನುಷ್ಠಾನಗೊಳ್ಳುತ್ತಿರುವ ಕುಡಿಯುವ ನೀರು ಹಾಗೂ ಒಳಚರಂಡಿ ಕಾಮಗಾರಿಗಳ ಪ್ರಗತಿ ಮತ್ತು ಸಂಬಂಧಿಸಿದ ವಿಷಯಗಳ ಬಗ್ಗೆ.

(I) ಸೌತ್ ಅವೆನ್ಯೂ ಬಡಾವಣೆಯಲ್ಲಿ ಒಳಚರಂಡಿ ನೀರು ಸರಾಗವಾಗಿ ಹರಿಯುವಂತೆ ದುರಸ್ಥಿ ಕಾರ್ಯವನ್ನು ಕೈಗೊಳ್ಳಲು ಹಲವು ಸಭೆಗಳಲ್ಲಿ ಸೂಚಿಸಲಾಗಿದ್ದು, ಈ ಬಗ್ಗೆ ಸಹಾಯಕ ಅಭಿಯಂತರರು ವಿಳಂಬ ಮಾಡದೇ ಕೂಡಲೇ ಅಗತ್ಯ ಕ್ರಮ ಕೈಗೊಳ್ಳುವುದು.

(II) ರಾಯಲ್ ಕೌಂಟಿ ಬಡಾವಣೆಗೆ ಸಂಬಂಧಪಟ್ಟಂತೆ Booster Pump ಕಾಮಗಾರಿಯನ್ನು ಹಾಗೂ House Connection ಅರ್ಜಿಗಳ ಅನುಮೋದನೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಸೂಚಿಸಲಾಯಿತು.

(III) ವಾರ್ಡ್ ವ್ಯಾಪ್ತಿಯಲ್ಲಿ GSLR ಕಾಮಗಾರಿಯು ಪ್ರಗತಿಯಲ್ಲಿದ್ದು, ಒಂದು ತಿಂಗಳಲ್ಲಿ ಪೂರ್ಣಗೊಳ್ಳಲಿದ್ದು, ತದನಂತರ ಹೆಚ್ಚಿನ ಪ್ರಮಾಣದಲ್ಲಿ ನೀರು ಸರಬರಾಜು ಮಾಡಲು ಕ್ರಮ ವಹಿಸುವುದಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ತಿಳಿಸಿದರು.

(IV) ಕ್ಲಾಸಿಕ್ ಆರ್ಚರ್ಡ್ಸ್ ಹಾಗೂ ಭಾಗ್ಯ ನಗರ ಹತ್ತಿರ ಬಿ.ಡಬ್ಲ್ಯೂ.ಎಸ್.ಎಸ್.ಬಿ ನೀರು ಉಕ್ಕಿ ನೇರವಾಗಿ ಮೋರಿಗೆ ಹರಿಯುತ್ತಿದ್ದು, ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದ್ದು, ಸದರಿ ವಿಷಯದ ಬಗ್ಗೆ ಕ್ರಮ ವಸಹಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಸೂಚಸಿಲಾಯಿತು.

(V) ಐ.ಡಿ.ಬಿ.ಐ ಬಡಾವಣೆಯಲ್ಲಿ ಒಳ ಚರಂಡಿ ಗಳ Covering Slabs ಗಳನ್ನು ಅಳವಡಿಸುವ ಬಗ್ಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

(VI) 9ನೇ ಹಂತ, ಜೆ.ಪಿ ನಗರ ದಲ್ಲಿ MH Desilting ಕಾರ್ಯವು ಜಾರಿಯಲ್ಲಿದ್ದು, ತ್ವರಿತವಾಗಿ ಪೂರ್ಣಗೊಳಿಸಲು ಸೂಚಿಸಲಾಯಿತು.

ಮೇಲ್ಕಂಡ ಎಲ್ಲಾ ವಿಷಯಗಳ ಬಗ್ಗೆ ಪ್ರಗತಿ ವರದಿಯನ್ನು ಒದಗಿಸಲು ಸೂಚಿಸಿದೆ.

4. ರಸ್ತೆ, ಪಾದಚಾರಿ ಹಾಗೂ ಮಳೆ ನೀರು ಚರಂಡಿ ಕಾಮಗಾರಿ ಬಗ್ಗೆ.

(I) ಕ್ಲಾಸಿಕ್ ಆರ್ಚರ್ಡ್ಸ್ ಹಾಗೂ ಸೌತ್ ಅವೆನ್ಯೂ ಬಡಾವಣೆಯಲ್ಲಿ ಬಿಟ್ಟು ಹೋಗಿರುವ ತಲಾ 400 ಮೀ. ರಸ್ತೆ ಕಾಮಗಾರಿ ಕಾರ್ಯವನ್ನು ಪೂರ್ಣಗೊಳಿಸುವ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

(II) ಸೌತ್ ಅವೆನ್ಯೂ ಬಡಾವಣೆಯಲ್ಲಿರುವ ಚಿಕ್ಕ ಬೀದಿ ಮೋರಿಗಳ Silt ಅನ್ನು ತೆರೆಯುವ ಬಗ್ಗೆ ಅಗತ್ಯ ಕ್ರಮ ವಹಿಸಲು ವಾರ್ಡ್ ಸಹಾಯಕ ಅಭಿಯಂತರರು ರವರಿಗೆ ಸೂಚಿಸಲಾಯಿತು.

(III) ರಾಯಲ್ ಕೌಂಟಿ ಬಡಾವಣೆಯಲ್ಲಿ 80 ಫೀಟ್ ರಸ್ತೆಯಲ್ಲಿರುವ ಪಾದಚಾರಿಗಳಲ್ಲಿ ಬೀದಿ ವ್ಯಾಪಾರಿಗಳನ್ನು ತೆರವುಗೊಳಿಸಿ ಮತ್ತೆ ಮರುಕಳಿಸದಂತೆ ಅಗತ್ಯ ಕ್ರಮ ವಹಿಸಲು ಹಿರಿಯ ಆರೋಗ್ಯ ಪರಿವೀಕ್ಷರು ರವರಿಗೆ ತಿಳಿಸಲಾಯಿತು.

(IV) ಸುಬ್ಬರಾಯನಕೆರೆ ಯಿಂದ ಬನ್ನೇರುಘಟ್ಟ ಮುಖ್ಯ ರಸ್ತೆಗೆ ಹಾದು ಹೋಗುವ ರಾಜಕಾಲುವೆಯಲ್ಲಿನ ಅಡಚಣೆಯನ್ನು ತೆರವುಗೊಳಿಸಲು ಸಕಾಯಕ ಕಾರ್ಯಪಾಲಕ ಅಭಿಯಂತರರು (ಎಸ್.ಡಬ್ಲ್ಯೂ.ಡಿ) ರವರೊಂದಿಗೆ ವಾರ್ಡ್ ಸಹಾಯಕ ಅಭಿಯಂತರರು ಅಗತ್ಯ ಕ್ರಮ ವಹಿಸುವುದು.

5. ಘನತ್ಯಾಜ್ಯ ನಿರ್ವಹಣೆಯ ಬಗ್ಗೆ.

(I) C & D Waste Management ಸಂಬಂಧಪಟ್ಟಂತೆ SWM Rules ಅನ್ವಯ ಸೂಕ್ತ ಸ್ಥಳವನ್ನು ಗುರುತಿಸಲು ಹಾಗೂ ತ್ಯಾಜ್ಯ ಸಾಗಾಣಿಕೆಗೆ ಮೀಸಲಿರಿಸುವ ನಿಗಧಿತ ವಾಹನಗಳ ಮಾಹಿತಿಯನ್ನು ಸಾರ್ವಜನಿಕರಿಗೆ ನೀಡಲು ಕ್ರಮ ವಹಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (SWM) ರವರಿಗೆ ಸೂಚಸಿಲಾಯಿತು.



Scanned by CamScanner

(II) ಜಂಬೂ ಸವಾರಿ ದಿಣ್ಣೆ ರಸ್ತೆ ಯಿಂದ ಸುಬ್ಬರಾಯನಕೆರೆ ರವರೆಗೆ ರಸ್ತೆಬದಿ ಸಂಗ್ರಹಣೆಯಾಗಿರುವ Debris ಸ್ವಚ್ಚಗೊಳಿಸಲು ಹಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಿಲಾಯಿತು.

6. ಕಟ್ಟಡ ನಿರ್ಮಾಣ.

(I) ಕ್ಲಾಸಿಕ್ ಆರ್ಚರ್ಡ್ಸ್ ಬಡಾವಣೆಯಲ್ಲಿ ಕೆಲ ಮಾಲಿಕರು building bye-law ಉಲ್ಲಂಘಿಸುತ್ತಿದ್ದು, ಈ ಬಗ್ಗೆ ದೂರು ನೀಡಿರುವ ಕಾರಣ ಅಪರ ನಿರ್ದೇಶಕರು (ನಗರ ಯೋಜನೆ) ರವರು ಸ್ಥಳ ಪರಿಶೀಲಿಸಿ ನಿಯಮಾನುಸಾರ ಕ್ರಮ ವಹಿಸಲು ಸೂಚಿಸಲಾಯಿತು.

7. ಉಪ ಅರಣ್ಯ ಸಂರಕ್ಷಣಾಧಿಕಾರಿ, ಗೊಟ್ಟಿಗೆರೆ ರವರು Biodiversity ದಾಖಲೆ ಯೋಜನೆಯ ಬಗ್ಗೆ ವಾರ್ಡ್ ವಹಿಸಬಹುದಾದ ಕಾರ್ಯಗಳ ಬಗ್ಗೆ ಮುಂದಿನ ಸಭೆಯಲ್ಲಿ ಮಾಹಿತಿ ನೀಡಲು ಸೂಚಿಸಲಾಯಿತು.

ಈ ಮೇಲೆ ತಿಳಿಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾ ವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.


ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: 194, ಗೊಟ್ಟಿಗೆರೆ.

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, BWSSB , ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
16. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
17. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
18. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
19. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
20. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
21. ಪೋಲೀಸ್ ಇನ್ಸ್‌ಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
22. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
23. ಸ್ಥಳೀಯ ನಾಗರಿಕ ಕಲ್ಯಾಣ ಸಂಸ್ಥೆಗಳು.



Scanned by CamScanner




Scanned by CamScanner